**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಐವನ್ ಡಿ' ಸೋಜಾ ಇವರ ಗಮನ ಸೆಳೆಯು ಸೂಚನೆ ನಿಯಮ-72ಕ್ಕೆ ಉತ್ತರ.**

**ಪ್ರಶ್ನೆ** :- ಮಂಗಳೂರಿನ ಬಂಟ್ವಾಳ ತಾಲ್ಲೂಕಿನ ಬಾಳೆಪುಣೆಯಲ್ಲಿ ಸ್ಥಾಪಿಸಲು ಉದ್ದೇಶಿಸಿರುವ ಜಿಲ್ಲಾ ಕಾರಾಗೃಹದ ಕಾಮಗಾರಿ ಇನ್ನೂ ಪೂರ್ಣಗೊಳ್ಳದೇ ನಗರದ ಮಧ್ಯಭಾಗದಲ್ಲಿ ಕಾರಾಗೃಹದಲ್ಲಿ ದಿನಂಪ್ರತಿ ಹೊಡೆದಾಟ ಮತ್ತು ಅವ್ಯವಹಾರ ನಡೆಯುತ್ತಿದ್ದು, ಈ ಬಗ್ಗೆ ಕ್ರಮ ಕೈಗೊಳ್ಳಲು ಇಲಾಖೆ ಗಮನಕ್ಕೆ ತಂದರೂ, ಇನ್ನೂ ಕ್ರಮ ಕೈಗೊಳ್ಳದೇ ಇರುವ ಬಗ್ಗೆ.

**ಉತ್ತರ**:- ಹಾಲಿ ಕಾರ್ಯನಿರ್ವಹಿಸುತ್ತಿರುವ ಮಂಗಳೂರು ಜಿಲ್ಲಾ ಕಾರಾಗೃಹದಲ್ಲಿ 210 ಬಂದಿಗಳಿಗೆ ಅಧಿಕೃತ ಸ್ಥಳಾವಕಾಶವಿದ್ದು, ಪ್ರಸ್ತುತ 356 ಬಂದಿಗಳು ದಾಖಲಿದ್ದು, ಬಂದಿಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಳವಾಗುತ್ತಿದ್ದು, ಅವರಲ್ಲಿ ಕುಖ್ಯಾತ ಭೂಗತ ಜಗತ್ತಿನ ಜೊತೆ ಸಂಪರ್ಕ ಹೊಂದಿರುವ ಬಂದಿಗಳು ಹಾಗೂ ವಿವಿಧ ರೂಢಾಪರಾಧಿ ಬಂದಿಗಳಿರುವುದರಿಂದ ಕರ್ನಾಟಕ ಕರಾವಳಿ ಪ್ರದೇಶದ ಭದ್ರತೆ ಮತ್ತು ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಮಂಗಳೂರಿನಲ್ಲಿ 1000 ಬಂದಿಗಳ ಸಾಮರ್ಥ್ಯದ ಅತ್ಯುನ್ನತ ಭದ್ರತಾ ವ್ಯವಸ್ಥೆಯ ಕಾರಾಗೃಹ ನಿರ್ಮಾಣ ಕಾಮಗಾರಿಯನ್ನು ಲೋಕೋಪಯೋಗಿ ಇಲಾಖೆಯವರಿಂದ ರೂ.110.00 ಕೋಟಿಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ದಿನಾಂಕ:01-03-2019ರ ಆದೇಶದಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. ಸದರಿ ಆದೇಶದನ್ವಯ ಮಂಗಳೂರು ನೂತನ ಕೇಂದ್ರ ಕಾರಾಗೃಹ ನಿರ್ಮಾಣಕ್ಕೆ ಲೋಕೋಪಯೋಗಿ ಇಲಾಖೆ, ಮಂಗಳೂರು ವಿಭಾಗ ರವರು ಸಲ್ಲಿಸಿದ್ದ ರೂ.110.00 ಕೋಟಿಗಳ ಅಂದಾಜು ಪಟ್ಟಿಯನ್ವಯ 2022-23 ರ ಅಂತ್ಯಕ್ಕೆ ರೂ.110.00 ಕೋಟಿಗಳ ಪೂರ್ಣ ಅನುದಾನವನ್ನು ಲೋಕೋಪಯೋಗಿ ಇಲಾಖೆ, ಮಂಗಳೂರು ವಿಭಾಗಕ್ಕೆ ಬಿಡುಗಡೆಗೊಳಿಸಲಾಗಿರುತ್ತದೆ. ಸದರಿ ಕಾಮಗಾರಿಯು ಮುಕ್ತಾಯದ ಹಂತದಲ್ಲಿರುತ್ತದೆ.

ಮುಂದುವರೆದು, ಪ್ರಸ್ತುತ ಕಾರ್ಯನಿರ್ವಾಹಕ ಇಂಜನೀಯರ್, ಲೋಕೋಪಯೋಗಿ ಇಲಾಖೆ, ಮಂಗಳೂರು ವಿಭಾಗ, ಮಂಗಳೂರು, ಇವರು ನೂತನ ಕೇಂದ್ರ ಕಾರಾಗೃಹ ನಿರ್ಮಾಣ ಕಾಮಗಾರಿಯು ಮಾಸ್ಟರ್ ಪ್ಲಾನ್ ನಕಾಶೆ ಸಂಖ್ಯೆ: 14185 /MASTER PLAN/R2 ರಂತೆ ಈಗಾಗಲೇ ಮೊದಲನೇ ಹಂತದ ಕಾಮಗಾರಿಯು ಮುಕ್ತಾಯದ ಹಂತದಲ್ಲಿದ್ದು, ಮಾಸ್ಟರ್ ಪ್ಲಾನ್ ನಕಾಶೆಯಂತೆ ಕಾಮಗಾರಿಯನ್ನು ಸಂಪೂರ್ಣ ರೀತಿಯಲ್ಲಿ ಕೈಗೊಳ್ಳುವ ಸಲುವಾಗಿ ಮಂಗಳೂರು ನೂತನ ಕೇಂದ್ರ ಕಾರಾಗೃಹದ 2 ನೇ ಹಂತದ ಕಾಮಗಾರಿಗೆ ರೂ.179.00 ಕೋಟಿಗಳ ಅಂದಾಜು ಪಟ್ಟಿಯನ್ನು ಸಲ್ಲಿಸಿರುತ್ತಾರೆ.

ಸದರಿ ಕಾಮಗಾರಿಯನ್ನು ಕೈಗೊಳ್ಳಲು ಲೆಕ್ಕಶೀರ್ಷಿಕೆ 4059-80-051-0-13 ಸೆರೆಮನೆಗಳ ನಿರ್ಮಾಣ 386 ಕಟ್ಟಡಗಳ ಖರೀದಿ ಮತ್ತು ನಿರ್ಮಾಣ ಅಡಿಯಲ್ಲಿ ಆಡಳಿತಾತ್ಮಕ ಮಂಜೂರಾತಿ ನೀಡಿ, 2025-26 ನೇ ಸಾಲಿನ ಆಯವ್ಯಯದ ಸದರಿ ಲೆಕ್ಕ ಶೀರ್ಷಿಕೆಯಡಿ ಸರ್ಕಾರವು ಒದಗಿಸಿರುವ ರೂ.100.00 ಕೋಟಿಗಳ ಅನುದಾನದಲ್ಲಿ ರೂ.15.00ಕೋಟಿ ಅನುದಾನ ನಿಗಧಿಪಡಿಸಿಕೊಳ್ಳುವ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯು, ಸದರಿ ಕಾಮಗಾರಿಗೆ

ಆರ್ಥಿಕ ಇಲಾಖೆಯ ಮತ್ತು ಸಚಿವ ಸಂಪುಟದ ಅನುಮೋದನೆ ಪಡೆದಿರುವುದಿಲ್ಲವಾದ್ದರಿಂದ ಸದರಿ ಕಾಮಗಾರಿಯನ್ನು ತೆಗೆದುಕೊಳ್ಳಲು ಅವಕಾಶವಾಗುವುದಿಲ್ಲವೆಂದು ನಿರ್ದೇಶಿಸಿರುತ್ತದೆ.

ಪ್ರಸ್ತುತ, ಮಂಗಳೂರು ನೂತನ ಕೇಂದ್ರ ಕಾರಾಗೃಹದ 2ನೇ ಹಂತದ ಕಾಮಗಾರಿಗಳನ್ನು ಪ್ರಾರಂಭಿಸುವ ಸಲುವಾಗಿ ಲೆಕ್ಕಶೀರ್ಷಿಕೆ 4059-80-051-0-13 ಸೆರೆಮನೆಗಳ ನಿರ್ಮಾಣ 386 ಕಟ್ಟಡಗಳ ಖರೀದಿ ಮತ್ತು ನಿರ್ಮಾಣ ಅಡಿಯಲ್ಲಿ ರೂ.15.00 ಕೋಟಿಗಳ ಅನುದಾನವನ್ನು ಹೆಚ್ಚುವರಿಯಾಗಿ ಒದಗಿಸಿ ಬಿಡುಗಡೆಗೊಳಿಸುವಂತೆ ಮಹಾನಿರ್ದೇಶಕರು, ಕಾರಾಗೃಹ ಮತ್ತು ಸುಧಾರಣೆ ಸೇವೆ ಇಲಾಖೆ ಇವರು ಪ್ರಸ್ತಾವನೆ ಸಲ್ಲಿಸಿದ್ದು, ಪ್ರಸ್ತುತ ಪ್ರಸ್ತಾವನೆಯು ಸರ್ಕಾರದಲ್ಲಿ ಪರಿಶೀಲನೆಯಲ್ಲಿರುತ್ತದೆ.

**ಸಂಖ್ಯೆ: ಹೆಚ್‌ಡಿ 355 ಪಿಆರ್‌ಎ 2025**

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು